**ಪೊಲೀಸ್ ಇಲಾಖೆ/ POLICE DEPARTMENT**

**Recruitment of Scientific Officers in Forensic Science Laboratory (FSL) - 2021**

(**ISO:** 9001–2015 ಪ್ರಮಾಣಿತ ನೇಮಕಾತಿ ಪ್ರಕ್ರಿಯೆ)

**ಸಂಖ್ಯೆ: 12/ನೇಮಕಾತಿ–2/2021–22**

ವಿಷಯ: ನ್ಯಾಯ ವಿಜ್ಞಾನ ಪ್ರಯೋಗಾಲಯ ಮತ್ತು ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯ ಘಟಕಗಳಲ್ಲಿ ಖಾಲಿ ಇರುವ ಮಿಕ್ಕುಳಿದ ವೃಂದದ ವೈಜ್ಞಾನಿಕ ಅಧಿಕಾರಿ ಹುದ್ದೆಗಳ ನೇಮಕಾತಿ ಕುರಿತು.

ಉಲ್ಲೇಖ: ಕರ್ನಾಟಕ ರಾಜ್ಯ ಪತ್ರ ದಿನಾಂಕ: 28.05.2021 ರಲ್ಲಿ ಪ್ರಕಟಿಸಲಾದ ಅಧಿಸೂಚನೆ ಸಂಖ್ಯೆ: 12/ನೇಮಕಾತಿ–2/2021–22

~*~*~*~

ಉಲ್ಲೇಖಿತ ಅಧಿಸೂಚನೆಯನ್ವಯ ಪೊಲೀಸ್ ಇಲಾಖೆಯಲ್ಲಿನ ನ್ಯಾಯ ವಿಜ್ಞಾನ ಪ್ರಯೋಗಾಲಯ ಮತ್ತು ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯ ಘಟಕಗಳಲ್ಲಿ ಖಾಲಿ ಇರುವ ಮಿಕ್ಕುಳಿದ ವೃಂದದ ವೈಜ್ಞಾನಿಕ ಅಧಿಕಾರಿ ಖಾಲಿ ಹುದ್ದೆಗಳ ನೇರ ನೇಮಕಾತಿ ಸಲುವಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ. ಅರ್ಜಿಯನ್ನು ಆನ್‌ಲೈನ್ ಮುಖಾಂತರ ಸಲ್ಲಿಸಲು ಕೊನೆಯ ದಿನಾಂಕವನ್ನು 07.07.2021 ಸಂಜೆ 06.00 ಗಂಟೆಯವರೆಗೆ ಮತ್ತು ಶುಲ್ಕವನ್ನು ಅಧಿಕೃತ ಬ್ಯಾಂಕ್ ಅಥವಾ ಸ್ಥಳೀಯ ಅಂಚೆ ಕಛೇರಿಗಳ ವೇಳೆಯಲ್ಲಿ ಪಾವತಿಸಲು ಕೊನೆಯ ದಿನಾಂಕ: 09.07.2021ಕ್ಕೆ ನಿಗದಿಗೊಳಿಸಲಾಗಿತ್ತು.

ಮೇಲ್ಕಂಡ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ದಿನಾಂಕವನ್ನು ಪ್ರಾರಂಭಿಸಿದ ಸಮಯದಲ್ಲಿ ರಾಜ್ಯದಲ್ಲಿ ಲಾಕ್‌ಡೌನ್ ಇದ್ದ ಕಾರಣ ಹಾಗೂ ಆಡಳಿತಾತ್ಮಕ ಕಾರಣಗಳಿಂದ ಮತ್ತು ಅಭ್ಯರ್ಥಿಗಳ ಹಿತದೃಷ್ಟಿಯಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ವಿಸ್ತರಿಸಲು ತೀರ್ಮಾನಿಸಿ **ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು 07.07.2021 ರಿಂದ 20.07.2021 ರವರೆಗೆ ಮತ್ತು ಶುಲ್ಕವನ್ನು ಅಧಿಕೃತ ಬ್ಯಾಂಕ್ ಅಥವಾ ಸ್ಥಳೀಯ ಅಂಚೆ ಕಛೇರಿಗಳ ವೇಳೆಯಲ್ಲಿ ಪಾವತಿಸುವ ದಿನಾಂಕವನ್ನು 09.07.2021 ರಿಂದ 22.07.2021 ರವರೆಗೆ ವಿಸ್ತರಿಸಲಾಗಿದೆ**. ಉಲ್ಲೇಖಿತ ಅಧಿಸೂಚನೆ ದಿನಾಂಕ: 28.05.2021ರಲ್ಲಿ ಈಗಾಗಲೇ ನಿಗದಿಪಡಿಸಿರುವಂತೆ ದಿನಾಂಕ: 07.07.2021ನ್ನೇ ವಯೋಮಿತಿಯ ಕೊನೆಯ ದಿನಾಂಕವನ್ನಾಗಿ ಪರಿಗಣಿಸಲಾಗುವುದು. ಆದರೆ ಜಾತಿ ಮತ್ತು ಆದಾಯ ಮೀಸಲಾತಿ ಹಾಗೂ ಇತರೆ ದಾಖಲೆಗಳಿಗೆ ವಿಸ್ತರಿಸಿದ ದಿನಾಂಕವಾದ 20.07.2021ನ್ನು ಕೊನೆಯ ದಿನಾಂಕವಾಗಿ ಪರಿಗಣಿಸಲಾಗುವುದು. ಉಳಿದಂತೆ, ಸದರಿ ಅಧಿಸೂಚನೆಯಲ್ಲಿ ನೀಡಲಾಗಿರುವ ಇತರೆ ಅರ್ಹತಾ ಷರತ್ತುಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.

ಸಹಿ/–
ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ ಹಾಗೂ ಅಧ್ಯಕ್ಷರು,
ನ್ಯಾಯ ವಿಜ್ಞಾನ ಪ್ರಯೋಗಾಲಯಗಳು,
ವೈಜ್ಞಾನಿಕ ಅಧಿಕಾರಿಗಳ ವಿಶೇಷ ಆಯ್ಕೆ ಸಮಿತಿ,
ಕಾರ್ಲಟನ್ ಭವನ, ಅರಮನೆ ರಸ್ತೆ,
ಬೆಂಗಳೂರು–560 001.